ಕರ್ನಾಟಕ ಸರ್ಕಾರ

## ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಸಾಸಂಇ : ಉ ನಿ : ಸುಮಪ : 2014–15 : ದಿನಾಂಕ: 13–1–2015

## ಪತ್ರಿಕಾ ಆಮಂತ್ರಣ

| ಕ್ರಮ ಸಂಖ್ಯೆ | ಕಾರ್ಯಕ್ರಮಗಳ ವಿವರ | ದಿನಾಂಕ ಸಮಯ | ಕಾರ್ಯಕ್ರಮ ನಡೆಯುವ ಸ್ಥಳ |
|---|---|---|---|
| 1. | ಪತ್ರಿಕಾಗೋಷ್ಠಿ:<br>27ನೇ ಕರ್ನಾಟಕ ರಾಜ್ಯ ಸ್ಕೌಟ್ಸ್ ಮತ್ತು ಗೈಡ್ಸ್ ಜಾಂಬೋರೇಟ್ ಕುರಿತು.<br>ಪಾಲ್ಗೊಳ್ಳುವವರು:<br>ಶ್ರೀ ಪಿ.ಜಿ.ಆರ್. ಸಿಂಧ್ಯಾ, ರಾಜ್ಯ ಮುಖ್ಯ ಆಯುಕ್ತರು/ಸ್ಕೌಟ್ಸ್ ಅಂಡ್ ಗೈಡ್ಸ್.<br>ಶ್ರೀ ಮೊಹಮ್ಮದ್ ಮೊಹಿಸಿನ್, ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, | 14–01–2015<br>ಬುಧವಾರ<br>ಬೆಳಗ್ಗೆ<br>11–30 ಗಂಟೆಗೆ | ಸಭಾಂಗಣ, ನೆಲಮಹಡಿ, ವಾರ್ತಾ ಸೌಧ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001. |
| 2. | ಪತ್ರಿಕಾಗೋಷ್ಠಿ:<br>ನಿರ್ದೇಶಕರು, ತೋಟಗಾರಿಕೆ ಇಲಾಖೆ, ಬೆಂಗಳೂರು. | 14–01–2015<br>ಬುಧವಾರ<br>ಅಪರಾಹ್ನ<br>12–00 ಗಂಟೆಗೆ | ಡಾ. ಎಂ.ಹೆಚ್. ಮರೀಗೌಡ ಸ್ಮಾರಕ ಸಭಾಂಗಣ, ಲಾಲ್‌ಬಾಗ್, ಬೆಂಗಳೂರು. |

ನಿರ್ದೇಶಕರ ಪರವಾಗಿ

## ಪತ್ರಿಕಾ ಪ್ರಕಟಣೆ

# ಪದವಿಯಲ್ಲಿ ಐಚ್ಛಿಕ ವಿಷಯವಾಗಿ ಎನ್.ಎಸ್.ಎಸ್. ಮತ್ತು ಎನ್.ಸಿ.ಸಿ.

ಬೆಂಗಳೂರು, ಜನವರಿ 13 (ಕರ್ನಾಟಕ ವಾರ್ತೆ)

ಪದವಿಯಲ್ಲಿ ಎನ್.ಎಸ್.ಎಸ್. ಮತ್ತು ಎನ್.ಸಿ.ಸಿ. ವಿಷಯಗಳನ್ನು ಐಚ್ಛಿಕ ವಿಷಯವಾಗಿ ಸೇರಿಸಲಾಗುವುದೆಂದು ಬೆಂಗಳೂರು ವಿಶ್ವ ವಿದ್ಯಾನಿಲಯದ ಕುಲಪತಿ ಪ್ರೊ. ಬಿ. ತಿಮ್ಮೇಗೌಡ ಅವರು ತಿಳಿಸಿದರು.

ಗೃಹ ವಿಜ್ಞಾನ ಕಾಲೇಜಿನ ಸಭಾಂಗಣದಲ್ಲಿ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ರಾಜ್ಯ ರಾಷ್ಟ್ರೀಯ ಸೇವಾ ಯೋಜನಾ ಕೋಶ, ಕೇಂದ್ರ ರಾಷ್ಟ್ರೀಯ ಸೇವಾ ಯೋಜನೆ, ಪ್ರಾದೇಶಿಕ ಕೇಂದ್ರ, ಬೆಂಗಳೂರು ವಿಶ್ವವಿದ್ಯಾನಿಲಯ ಹಾಗೂ ಶ್ರೀಮತಿ ವಿ.ಎಚ್.ಡಿ. ಕೇಂದ್ರೀಯ ಗೃಹ ವಿಜ್ಞಾನ ಕಾಲೇಜಿನ ಸಂಯುಕ್ತ ಆಶ್ರಯದಲ್ಲಿ ಏರ್ಪಡಿಸಲಾಗಿದ್ದ ಎಲ್ಲಾ ವಿಶ್ವ ವಿದ್ಯಾಲಯ ಮತ್ತು ಕಾಲೇಜುಗಳ ಆವರಣಗಳಲ್ಲಿ ನಿರಂತರ ಸ್ವಚ್ಛತೆ ಮತ್ತು ಪ್ಲಾಸ್ಟಿಕ್ ಮುಕ್ತ ಆಂದೋಲನದ ಅಧ್ಯಕ್ಷತೆಯನ್ನು ವಹಿಸಿ ಅವರು ಮಾತನಾಡಿದರು.

ಸಾಮಾಜಿಕ ಜವಾಬ್ದಾರಿಯನ್ನು ಹೊಂದಿರುವ ಎನ್.ಸಿ.ಸಿ. ಮತ್ತು ಎನ್.ಎಸ್.ಎಸ್. ವಿಷಯದಲ್ಲಿ ಇನ್ನೂ ಹೆಚ್ಚಿನ ಪರಿಣತಿಯನ್ನು ವಿದ್ಯಾರ್ಥಿಗಳು ಹೊಂದಬೇಕೆಂಬ ಉದ್ದೇಶದಿಂದ 2015-16 ನೇ ಸಾಲಿಗೆ ಐಚ್ಛಿಕ ವಿಷಯವಾಗಿ ಅಳವಡಿಸುವ ಜೊತೆಗೆ ಪಠ್ಯಪುಸ್ತಕವನ್ನು ತಯಾರಿಸಲಾಗುತ್ತಿದೆ. ಅಲ್ಲದೆ, ಈ ವಿಷಯದಲ್ಲಿ ತೊಡಗಿಸಿಕೊಂಡಿರುವ ಶಿಕ್ಷಕರ ಸಾಧನೆಯನ್ನು ಪರಿಗಣಿಸಿ ಅವರಿಗೆ ಬಡ್ತಿಗೆ ಅವಕಾಶವನ್ನು ನೀಡಲಾಗುವುದೆಂದರು.

ನಮ್ಮ ದೇಶದ ಕಸ ವಿಲೇವಾರಿ ಸಮಸ್ಯೆಯನ್ನು ಹೋಗಲಾಡಿಸಬೇಕಾದರೆ ಮೊದಲು ನಮ್ಮ ಮನೆಗಳಲ್ಲಿ ತ್ಯಾಜ್ಯಗಳನ್ನು ಬೇರ್ಪಡಿಸಿದ ನಂತರವೇ ವಿಲೇ ಮಾಡಬೇಕು. ವಿದ್ಯಾರ್ಥಿಗಳು ಕಾಲೇಜು ಆವರಣವನ್ನು ಮಾತ್ರವಲ್ಲದೆ ಸಾರ್ವಜನಿಕ ಸ್ಥಳಗಳನ್ನೂ ಸ್ವಚ್ಛವಾಗಿಡುವಂತೆ ಜನರಲ್ಲಿ ಜಾಗೃತಿ ಮೂಡಿಸುವಂತಹ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಬೇಕು. ವಿದ್ಯಾರ್ಥಿಗಳು ವಾರದಲ್ಲಿ ಕನಿಷ್ಠ ಒಂದು ಗಂಟೆಯಾದರೂ ಸ್ವಚ್ಛತಾ ಕಾರ್ಯದಲ್ಲಿ ಭಾಗವಹಿಸುವುದನ್ನು ಕಡ್ಡಾಯಗೊಳಿಸಲಾಗುವುದೆಂದು ಅವರು ತಿಳಿಸಿದರು.

ಮುಖ್ಯ ಅತಿಥಿಗಳಾಗಿ ಭಾಗವಹಿಸಿದ್ದ ಕಾಲೇಜು ಶಿಕ್ಷಣ ಇಲಾಖೆಯ ಆಯುಕ್ತರಾದ ಶ್ರೀ ಬಿ.ಜಿ. ನಂದಕುಮಾರ್, ಅವರು ಮಾತನಾಡಿ ಪ್ಲಾಸ್ಟಿಕ್ ಬಳಕೆಯಿಂದ ಪರಿಸರ ಹಾಳಾಗುತ್ತಿದೆ. ಪ್ಲಾಸ್ಟಿಕ್ ಮಣ್ಣಿನಲ್ಲಿ ಕರಗಲು 300 ವರ್ಷಗಳು ಬೇಕಾಗುತ್ತದೆ. ಅದೇ ಕಾಗದವಾದರೆ ಒಂದೇ ವಾರದಲ್ಲಿ ಕರಗುತ್ತದೆ. ಮುಂದಿನ ದಿನಗಳಲ್ಲಿ ಶುದ್ಧ ನೀರು, ಗಾಳಿ ಸಿಗದಂತಾಗಬಹುದು. ಆದ್ದರಿಂದ ಯುವ ಜನಾಂಗದ ವಿದ್ಯಾರ್ಥಿಗಳು ಪ್ಲಾಸ್ಟಿಕ್ ಬಳಕೆ ಮಾಡುವುದನ್ನು ಕೈ ಬಿಡಬೇಕು. ಆದ್ದರಿಂದ ಯುವಜನರು ಪರಿಸರ ಮಾಲಿನ್ಯ ತಡೆಗೆ ಹೆಚ್ಚಿನ ಗಮನಹರಿಸುವ ಜೊತೆಗೆ ರೆಡಿಮೇಡ್ ಜಂಕ್ ಫುಡ್ ತಿನ್ನುವುದನ್ನು ಬಿಟ್ಟು ದೇಶೀಯ ಆಹಾರವನ್ನು ಸೇವಿಸುವ ಮೂಲಕ ತಮ್ಮ ಆರೋಗ್ಯವನ್ನು ಕಾಪಾಡಿಕೊಳ್ಳಬೇಕೆಂದರು.

ಕಾರ್ಯಕ್ರಮದ ಉದ್ಘಾಟನೆಗೂ ಮುಂಚೆ ಎನ್.ಎಸ್.ಎಸ್. ವಿದ್ಯಾರ್ಥಿಗಳು " ರಾಷ್ಟ್ರೀಯ ಸೇವೆಯ ಮಾಡೋಣ ಬನ್ನಿ" ಎಂಬ ಗೀತೆಯನ್ನು ಹಾಡುವ ಮೂಲಕ ವಿದ್ಯಾರ್ಥಿಗಳಲ್ಲಿ ಉತ್ಸಾಹವನ್ನು ತುಂಬಿದರು. ಕಾರ್ಯಕ್ರಮದಲ್ಲಿ ಕೇಂದ್ರ ರಾಷ್ಟ್ರೀಯ ಸೇವಾ ಯೋಜನೆಯ ಮುಖ್ಯಸ್ಥರಾದ ಶ್ರೀ ಎ.ಎನ್. ಪೂಜಾರ್, ರಾಜ್ಯ ಸಂಪರ್ಕಾಧಿಕಾರಿ ಮತ್ತು ಸರ್ಕಾರದ ಪದನಿಮಿತ್ತ ಜಂಟಿ ಕಾರ್ಯದರ್ಶಿ ಡಾ. ಗಣನಾಥ ಶೆಟ್ಟಿ ಎಕ್ಕಾರು, ರಾಷ್ಟ್ರೀಯ ಸೇವಾ ಯೋಜನೆಯ ಸಂಯೋಜನಾಧಿಕಾರಿ ಡಾ. ಶ್ರೀನಿವಾಸ್, ಶ್ರೀಮತಿ ವಿ.ಎಚ್.ಡಿ. ಕೇಂದ್ರೀಯ ಗೃಹ ವಿಜ್ಞಾನ ಕಾಲೇಜಿನ ಪ್ರಾಂಶುಪಾಲರಾದ ಡಾ. ಡಿ. ಸುನಂದ ಉಪಸ್ಥಿತರಿದ್ದರು.

ಪಹೊ:ಬಿಜಿಪಿ:ಜಿಪಿಆರ್.

## ಟೈಲರಿಂಗ್ ಕ್ರಾಫ್ಟ್ ತರಬೇತಿ ಪರೀಕ್ಷೆ

**ಬೆಂಗಳೂರು, ಜನವರಿ 13 (ಕರ್ನಾಟಕ ವಾರ್ತೆ)**

ಬೆಂಗಳೂರು ಅರಮನೆ ರಸ್ತೆಯಲ್ಲಿರುವ ತಾಂತ್ರಿಕ ಪರೀಕ್ಷಾ ಮಂಡಳಿಯು ಒಂದು ವರ್ಷದ ಟೈಲರಿಂಗ್ ಕ್ರಾಫ್ಟ್ ತರಬೇತಿ ಪರೀಕ್ಷೆಯನ್ನು 2015 ರ ನವೆಂಬರ್, ಡಿಸೆಂಬರ್ ಮಾಹೆಯಲ್ಲಿ ಪರೀಕ್ಷೆ ನಡೆಸಲಿದೆ. ಈ ಪರೀಕ್ಷೆಗೆ ಬಾಹ್ಯ ಅಭ್ಯರ್ಥಿಯಾಗಿ ಹಾಜರಾಗಲು ಬಯಸುವ 7ನೇ ತರಗತಿ ಉತ್ತೀರ್ಣರಾದ ಅಭ್ಯರ್ಥಿಗಳು ಅರ್ಹತಾ ಪತ್ರವನ್ನು ಪಡೆಯುವ ಶುಲ್ಕವನ್ನು (ರೂ. 20-00) ಪಾವತಿಸಿ 5-02-2015 ರೊಳಗಾಗಿ ಅರ್ಜಿ ಸಲ್ಲಿಸಬಹುದು. ಮಾರ್ಚ್ 5 ರವರೆಗೆ ದಂಡ ಶುಲ್ಕದೊಂದಿಗೆ (ರೂ. 25-00) ಅರ್ಜಿ ಸಲ್ಲಿಸಬಹುದಾಗಿದೆ. ಹೆಚ್ಚಿನ ವಿವರಗಳಿಗೆ ಕಾರ್ಯದರ್ಶಿ, ತಾಂತ್ರಿಕ ಪರೀಕ್ಷಾ ಮಂಡಳಿ, ಅರಮನೆ ರಸ್ತೆ, ಬೆಂಗಳೂರು ಇವರನ್ನು ಸಂಪರ್ಕಿಸಲು ಕೋರಿದೆ.

ಪಹೊ:ಬಾಬು:ಜಿಪಿಆರ್.

## ಪರೀಕ್ಷೆ ಮುಂದೂಡಿಕೆ

**ಬೆಂಗಳೂರು, ಜನವರಿ 13 (ಕರ್ನಾಟಕ ವಾರ್ತೆ)**

ಅಖಿಲ ಭಾರತ ಸೈನಿಕ ಶಾಲೆಯ 6 ಮತ್ತು 9ನೇ ತರಗತಿ ಪ್ರವೇಶಕ್ಕೆ ನಡೆಸುವ ಪ್ರವೇಶ ಪರೀಕ್ಷೆಯನ್ನು 2015 ರ ಫೆಬ್ರವರಿ 22 ಕ್ಕೆ ಮುಂದೂಡಲಾಗಿದೆ.

ಪಹೊ:ಬಾಬು:ಜಿಪಿಆರ್.

## ಗಣರಾಜ್ಯೋತ್ಸವ : ಬಾಲಭವನದಲ್ಲಿ ವಿವಿಧ ಸ್ಪರ್ಧೆಗಳು

**ಬೆಂಗಳೂರು, ಜನವರಿ 13 (ಕರ್ನಾಟಕ ವಾರ್ತೆ)**

ಬೆಂಗಳೂರಿನ ಬಾಲಭವನವು ಗಣರಾಜ್ಯೋತ್ಸವ ದಿನದ ಅಂಗವಾಗಿ 5 ರಿಂದ 16 ವರ್ಷದ ಮಕ್ಕಳಿಗೆ ಜನವರಿ 26 ರಂದು ಬೆಳಿಗ್ಗೆ 10-30 ಗಂಟೆಯಿಂದ ದೇಶಭಕ್ತಿ ಗೀತೆ, ರಸಪ್ರಶ್ನೆ (ವಿಷಯ : ಭಾರತ ಇತಿಹಾಸ - ಸ್ವಾತಂತ್ರ್ಯ ಚಳುವಳಿ) ಮತ್ತು ವೇಷಭೂಷಣ ಸ್ಪರ್ಧೆಯನ್ನು (ವಿಷಯ: ಸ್ವಾತಂತ್ರ್ಯ ಹೋರಾಟಗಾರರು/ರಾಷ್ಟ್ರೀಯ ನಾಯಕರು) ನಡೆಸಲಿದೆ. ಸ್ಪರ್ಧೆಗಳಲ್ಲಿ ಭಾಗವಹಿಸಲು ಆಸಕ್ತಿಯಿರುವ ಮಕ್ಕಳು ಜನವರಿ 23 ರೊಳಗೆ ಬೆಂಗಳೂರು ಬಾಲಭವನದಲ್ಲಿ ಹೆಸರನ್ನು ನೋಂದಾಯಿಸಬಹುದಾಗಿದೆ.

ಹೆಚ್ಚಿನ ವಿವರಗಳಿಗೆ ಹಾಗೂ ನೋಂದಾಣಿಗಾಗಿ ಕಾರ್ಯದರ್ಶಿಗಳ ಕಚೇರಿ, ಬಾಲಭವನ ಸೊಸೈಟಿ, ಕಬ್ಬನ್ ಪಾರ್ಕ್, ಬೆಂಗಳೂರು ಇಲ್ಲಿ ಖುದ್ದಾಗಿ ಅಥವಾ ದೂರವಾಣಿ ಸಂಖ್ಯೆ 080-22861423/22864189 ಮೂಲಕ ಸಂಪರ್ಕಿಸಲು ಕೋರಿದೆ. ಮಿಂಚು ಅಂಚೆ secybalbhavan.bng@gmail.com ಅನ್ನು ಸಂಪರ್ಕಿಸಬಹುದಾಗಿದೆ.

ಪಹೊ:ಬಾಬು:ಜಿಪಿಆರ್.

## ಮೌಖಿಕ ಸಂದರ್ಶನ

**ಬೆಂಗಳೂರು, ಜನವರಿ 13 (ಕರ್ನಾಟಕ ವಾರ್ತೆ)**

ಕರ್ನಾಟಕ ಲೋಕಸೇವಾ ಆಯೋಗವು ನಡೆಸಿದ 2014 ನೇ ಸಾಲಿನ ದ್ವಿತೀಯ ಅಧಿವೇಶನದ ಇಲಾಖಾ ಪರೀಕ್ಷೆಗಳ ಕನ್ನಡ ಭಾಷಾ ವಿಷಯದ ಮೌಖಿಕ ಸಂದರ್ಶನಕ್ಕೆ ಅರ್ಹರಾಗಿರುವ ಅಭ್ಯರ್ಥಿಗಳ ಪಟ್ಟಿಯನ್ನು ಆಯೋಗದ ಅಂತರ್ಜಾಲದಲ್ಲಿ ಪ್ರಕಟಿಸಿದೆ.

ಮೌಖಿಕ ಸಂದರ್ಶನಕ್ಕೆ ಅರ್ಹ ಅಭ್ಯರ್ಥಿಗಳಿಗೆ ಸಂದರ್ಶನದ ಸೂಚನಾ ಪತ್ರಗಳನ್ನು ಈಗಾಗಲೇ ರವಾನಿಸಲಾಗಿದೆ. ಸೂಚನಾಪತ್ರಗಳು ತಲುಪದೇ ಇರುವ ಅಭ್ಯರ್ಥಿಗಳು ಜನವರಿ 17 ರೊಳಗಾಗಿ ಆಯೋಗದ ಕೇಂದ್ರ ಕಚೇರಿಯ ದೂರವಾಣಿ ಸಂಖ್ಯೆ 080 – 30574944/3074945 ನ್ನು ಸಂಪರ್ಕಿಸಲು ಆಯೋಗದ ಪ್ರಕಟಣೆ ತಿಳಿಸಿದೆ.

ಪಹೊ:ಬಾಬು:ಜಿಪಿಆರ್.

## ಪುಸ್ತಕ ಪ್ರೇಮಿ ವಿದ್ಯಾರ್ಥಿ ಬಳಗಕ್ಕೆ ಅರ್ಜಿ ಆಹ್ವಾನ

**ಬೆಂಗಳೂರು, ಜನವರಿ 13 (ಕರ್ನಾಟಕ ವಾರ್ತೆ)**

ಕನ್ನಡ ಪುಸ್ತಕ ಪ್ರಾಧಿಕಾರವು ವಿದ್ಯಾರ್ಥಿ ಯುವಜನರನ್ನು ಸಾಹಿತ್ಯಾಭಿರುಚಿಗೆ ಆಕರ್ಷಿಸಲು ಹಾಗೂ ಸಾಂಸ್ಕೃತಿಕ ಕ್ರಿಯಾಶೀಲತೆಯನ್ನು ಬೆಳೆಸಲು ಪದವಿ ಕಾಲೇಜು ಹಾಗೂ ಸ್ನಾತಕೋತ್ತರ ಕೇಂದ್ರಗಳಲ್ಲಿ 'ಪುಸ್ತಕ ಪ್ರೇಮಿ ವಿದ್ಯಾರ್ಥಿ ಬಳಗ' ವನ್ನು ರಚಿಸಲು ಅರ್ಜಿಗಳನ್ನು ಆಹ್ವಾನಿಸಿದೆ.

ಕನಿಷ್ಠ 5 ರಿಂದ 15 ಮಂದಿ ವಿದ್ಯಾರ್ಥಿಗಳನ್ನೊಳಗೊಂಡಂತೆ ಕಾರ್ಯಕಾರಿ ಸಮಿತಿಯೊಂದನ್ನು ರಚಿಸಿಕೊಂಡು, ಆಯಾ ಕಾಲೇಜುಗಳ ಪ್ರಾಂಶುಪಾಲರು ಹಾಗೂ ಕನ್ನಡ ವಿಭಾಗಗಳ ಮುಖ್ಯಸ್ಥರ ಅನುಮೋದನೆಯೊಂದಿಗೆ ಅರ್ಜಿ ಸಲ್ಲಿಸಬಹುದಾಗಿದೆ.

ಕಾಲೇಜಿನಲ್ಲಿ ಸಾಂಸ್ಕೃತಿಕ ವಾತಾವರಣವನ್ನು ಕ್ರಿಯಾಶೀಲವಾಗಿಡುವ ನಿಟ್ಟಿನಲ್ಲಿ ತಿಂಗಳಿಗೆ ಒಂದರಂತೆ ಸಾಹಿತ್ಯಿಕ ಹಾಗೂ ಸಾಂಸ್ಕೃತಿಕ ಚಟುವಟಿಕೆಯನ್ನು ಈ ಬಳಗವು ಹಮ್ಮಿಕೊಳ್ಳುತ್ತದೆ. ಇದಕ್ಕಾಗಿ ಪ್ರಾಧಿಕಾರದಿಂದ ಕಾರ್ಯಕ್ರಮ ಒಂದಕ್ಕೆ ರೂ 5,000/– ಗರಿಷ್ಠ ಮಿತಿಯೊಳಗೆ ವಾಸ್ತವಿಕ ವೆಚ್ಚವನ್ನು ಭರಿಸಲಾಗುವುದು. ಇದಲ್ಲದೆ ಪ್ರಾಧಿಕಾರವು ಹಮ್ಮಿಕೊಳ್ಳುವ ಎಲ್ಲಾ ಯೋಜನೆ ಹಾಗೂ ಕಾರ್ಯಕ್ರಮಗಳಲ್ಲಿ ಈ 'ಪುಸ್ತಕ ಪ್ರೇಮಿ ವಿದ್ಯಾರ್ಥಿ ಬಳಗ' ವನ್ನು ತೊಡಗಿಸಿಕೊಳ್ಳಲಾಗುವುದು. ಅರ್ಜಿ ಸಲ್ಲಿಸಲು ಕಡೆಯ ದಿನಾಂಕ 30–01–2015.

ನಿಗದಿತ ಅರ್ಜಿ ನಮೂನೆಗಾಗಿ ಹಾಗೂ ಹೆಚ್ಚಿನ ಮಾಹಿತಿಗಾಗಿ ಇಲಾಖೆಯ ಜಿಲ್ಲಾ ಸಹಾಯಕ ನಿರ್ದೇಶಕರ ಕಚೇರಿಯನ್ನು ಅಥವಾ ಕನ್ನಡ ಪುಸ್ತಕ ಪ್ರಾಧಿಕಾರದ ಅಂತರ್ಜಾಲ

www.kannadapusthakapradhikara.com ಅನ್ನು ಸಂಪರ್ಕಿಸಬಹುದಾಗಿದೆ. ಅರ್ಜಿಗಳನ್ನು ದಿನಾಂಕ: 30–01–2015 ರೊಳಗೆ ಆಡಳಿತಾಧಿಕಾರಿಗಳು, ಕನ್ನಡ ಪುಸ್ತಕ ಪ್ರಾಧಿಕಾರ, ಕನ್ನಡ ಭವನ, ಜೆ.ಸಿ. ರಸ್ತೆ, ಬೆಂಗಳೂರು – 560 002 ಅವರಿಗೆ ಕಳುಹಿಸಿಕೊಡಲು ಕೋರಿದೆ.

ಪಹೊ:ಬಾಬು:ಜಿಪಿಆರ್.

## ಸಂಕ್ರಾಂತಿ ಹಬ್ಬ : ಗಣ್ಯರ ಶುಭಾಶಯಗಳು

**ಬೆಂಗಳೂರು, ಜನವರಿ 13 (ಕರ್ನಾಟಕ ವಾರ್ತೆ)**

ಸಂಕ್ರಾಂತಿ ಹಬ್ಬದ ಶುಭ ಸಂದರ್ಭದಲ್ಲಿ ನಾಡಿನ ಸಮಸ್ತ ಜನರ ಬದುಕಿನಲ್ಲಿ ಹೊಸ ಚೈತನ್ಯ ಮತ್ತು ಹುಮ್ಮಸ್ಸಿನೊಂದಿಗೆ ಸುಖ ಶಾಂತಿ ನೆಮ್ಮದಿಯನ್ನು ತರಲೆಂದು ಜವಳಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವ ಶ್ರೀ ಬಾಬುರಾವ್ ಚಿಂಚನಸೂರ್ ಅವರು ಶುಭ ಹಾರೈಸಿದ್ದಾರೆ.

ಪಹೊ:ಬಾಬು:ಜಿಪಿಆರ್.

## ಫ್ಲೋರೋಸಿಸ್ ಸಮಾಲೋಚಕರ ಹುದ್ದೆಗೆ ಅರ್ಜಿ ಆಹ್ವಾನ

**ಬೆಂಗಳೂರು, ಜನವರಿ 13 (ಕರ್ನಾಟಕ ವಾರ್ತೆ)**

ರಾಷ್ಟ್ರೀಯ ಫ್ಲೋರೋಸಿಸ್ ತಡೆ ಮತ್ತು ನಿಯಂತ್ರಣ ಕಾರ್ಯಕ್ರಮದಡಿ ಅರ್ಹ ಅಭ್ಯರ್ಥಿಗಳಿಂದ ಜಿಲ್ಲಾ ಫ್ಲೋರೋಸಿಸ್ ಸಮಾಲೋಚಕರ ಒಂದು ಹುದ್ದೆಗೆ (ಬೆಂಗಳೂರು ನಗರ) ನೇರ ಸಂದರ್ಶನ ನಡೆಸಲಾಗುವುದು. ದಿನಾಂಕ 23-1-2015 ರಂದು ಬೆಳಗ್ಗೆ 10-30 ಕ್ಕೆ ಅರ್ಹ ಅಭ್ಯರ್ಥಿಗಳು ತಮ್ಮ ವಿದ್ಯಾಭ್ಯಾಸದ ಮೂಲ ಹಾಗೂ ಒಂದು ಪ್ರತಿ ಅಂಕಪಟ್ಟಿಗಳೊಡನೆ ಪೌಷ್ಠಿಕ ಆಹಾರ, ವಿಭಾಗ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳ ನಿರ್ದೇಶನಾಲಯ, ಬೆಂಗಳೂರು ಇಲ್ಲಿ ಹಾಜರಾಗಲು ಸೂಚಿಸಿದೆ. ಈ ಹುದ್ದೆಯು 11 ತಿಂಗಳ ಕಾಲ ಗುತ್ತಿಗೆ ಆಧಾರದ ಸೇವೆಯದ್ದಾಗಿದ್ದು, ಎಂ.ಎಸ್ಸಿ ಮೈಕ್ರೋಬಯಾಲಜಿ, ಎಂ.ಎಸ್ಸಿ ಪೌಷ್ಠಿಕ ಆಹಾರ ಹಾಗೂ ಎಂ.ಎಸ್ಸಿ., ಲೈಫ್ ಸೈನ್ಸ್ ಪದವಿಯ ಅಭ್ಯರ್ಥಿಗಳನ್ನು ಪರಿಗಣಿಸಲಾಗುವುದೆಂದು ನಿರ್ದೇಶಕರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳ ನಿರ್ದೇಶನಾಲಯ ತಿಳಿಸಿದ್ದಾರೆ.

***ಛಾಯಾಚಿತ್ರ ಶೀರ್ಷಿಕೆ: 4144***

**ಏಪ್ರಿಲ್‌ನಲ್ಲಿ ರಾಜ್ಯಾದ್ಯಂತ ನಡೆಯುವ ಹಿಂದುಳಿದ ವರ್ಗಗಳ ಸಾಮಾಜಿಕ ಮತ್ತು ಶೈಕ್ಷಣಿಕ ಸ್ಥಿತಿಗಳ ಮತ್ತು ಸಮಸ್ಯೆಗಳ ಸಮೀಕ್ಷೆ ಕಾರ್ಯ ಕುರಿತ ಕಾರ್ಯಾಗಾರದಲ್ಲಿ ಹಿಂದುಳಿದ ವರ್ಗಗಳ ಸರ್ಕಾರದ ಪ್ರಧಾನ ಕಾರ್ಯದರ್ಶಿ ಡಾ : ಶಾಲಿನಿ ರಜನೀಶ್ ಅವರು ಇಂದು ತರಬೇತಿ ಪಡೆಯುವವರಿಗೆ ಕೈಗೊಳ್ಳಬೇಕಾದ ಕ್ರಮಗಳ ವಿವರಗಳನ್ನು ತಿಳಿಸಿದರು.**

***ಛಾಯಾಚಿತ್ರ ಶೀರ್ಷಿಕೆ: 4131***

**ರಾಷ್ಟ್ರೀಯ ಸೇವಾ ಯೋಜನೆಯ ಮೂಲಕ ರಾಜ್ಯದ ಎಲ್ಲಾ ವಿಶ್ವವಿದ್ಯಾನಿಲಯ ಮತ್ತು ಕಾಲೇಜುಗಳ ಆವರಣದಲ್ಲಿ ನಿರಂತರ ಸ್ವಚ್ಛತೆ ಮತ್ತು ಪ್ಲಾಸ್ಟಿಕ್ ಮುಕ್ತಗೊಳಿಸುವ ರಾಜ್ಯಮಟ್ಟದ ಆಂದೋಲನಕ್ಕೆ**

ಬೆಂಗಳೂರು ವಿಶ್ವವಿದ್ಯಾನಿಲಯದ ಕುಲಪತಿ ಪ್ರೊ. ಬಿ. ತಿಮ್ಮೇಗೌಡ ಚಾಲನೆ ನೀಡಿದರು. ಕಾಲೇಜು ಶಿಕ್ಷಣ ಇಲಾಖೆ ಆಯುಕ್ತ ಶ್ರೀ ಬಿ.ಜಿ. ನಂದಕುಮಾರ್ ಇನ್ನಿತರರು ಸಮಾರಂಭದಲ್ಲಿ ಪಾಲ್ಗೊಂಡಿದ್ದರು.